ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

360 (449) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಸಂಖ್ಯೆ ಇಲ್ಲದಿದ್ದರೂ ಆಹಾರ ಧಾನ್ಯಗಳ ಬಿಲ್ಲುಗಳ ಎತ್ತುವಳಿ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಬೀದರ್ ಜಿಲ್ಲೆಯ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರವನ್ನು ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು? (ತಾಲ್ಲೂಕುವಾರು ವಿವರ ನೀಡುವುದು)